ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ: DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ ದಿನಾಂಕ : DATE : 19/07/2019

# ರಾಜ್ಯಪಾಲರಿಗೆ ಬಿಜೆಪಿ ದೂರು



ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಸರಕಾರ ಬಹುಮತ ಸಾಬೀತಿಗೆ ವಿಳಂಬ ನೀತಿ ಅನುಸರಿಸುತ್ತಿದೆ ಎಂದು ರಾಜ್ಯ ಬಿಜೆಪಿ ನಿಯೋಗ ರಾಜ್ಯಪಾಲರಿಗೆ ದೂರು ಸಲ್ಲಿಸಿತು.

ಅಧಿವೇಶನದ ಸಂದರ್ಭದಲ್ಲಿ ಮಧ್ಯಾಹ್ನದ ಊಟದ ವಿರಾಮದ ವೇಳೆ ರಾಜ್ಯಪಾಲರನ್ನು ಸಂಪರ್ಕಿಸಿದ್ದ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಆಡಳಿತ ಪಕ್ಷಕ್ಕೆ ಬಹುಮತ ಇಲ್ಲ, ಇದೇ ಕಾರಣಕ್ಕೆ ವಿಶ್ವಾಸ ಮತಯಾಚನೆಗೆ ಸಿಎಂ ಕುಮಾರಸ್ವಾಮಿ ವಿಳಂಬ ಮಾಡುತ್ತಿದ್ದಾರೆ. ಹೀಗಾಗಿ ರಾಜ್ಯಪಾಲರು ಕೂಡಲೇ ಮಧ್ಯಪ್ರವೇಶಿಸಿ ಸೂಕ್ತ ತೀರ್ಮಾನ ತೆಗೆದುಕೊಳ್ಳಬೇಕು ಎಂದು ಮನವಿ ಮಾಡಿದ್ದರು.

ವಿರೋಧ ಪಕ್ಷದ ಮನವಿಗೆ ಸ್ಪಂದಿಸಿದ್ದ ರಾಜ್ಯಪಾಲರು ಇಂದಿನ ಸಂಪೂರ್ಣ ಕಲಾಪದ ಮಾಹಿತಿ ಪಡೆಯಲು ಸ್ಪೀಕರ್ ಬಳಿ ತಮ್ಮ ಕಾರ್ಯದರ್ಶಿಯನ್ನು ಕಳಿಸಿದ್ದರು. ಹೀಗೆ ಸಂಪೂರ್ಣ ಮಾಹಿತಿ ಪಡೆದ ರಾಜ್ಯಪಾಲರು ಸಂಜೆ 4.30ರ ಸುಮಾರಿಗೆ ಸ್ಪೀಕರ್ ಅವರಿಗೆ ಸೂಚನೆ ನೀಡಿದ್ದು, ಆಡಳಿತ ಪಕ್ಷ ಗುರುವಾರವೇ ಬಹುಮತ ಸಾಬೀತುಪಡಿಸಬೇಕು ಎಂದು ಸೂಚನೆ ನೀಡಿದ್ದರು.

ಗುರುವಾರ ಸದನಕ್ಕೆ ಮಹತ್ವದ ಸೂಚನೆ ನೀಡಿದ ರಾಜ್ಯಪಾಲ ವಜುಭಾಯಿ ವಾಲಾ, ಕುಮಾರಸ್ವಾಮಿ ನೇತೃತ್ವದ ಆಡಳಿತ ಸರಕಾರ ಗುರುವಾರವೇ ಬಹುಮತ ಸಾಬೀತುಪಡಿಸಬೇಕು, ಕಾಲಹರಣ ಮಾಡಲು ಆಸ್ಪದ ನೀಡಬಾರದು ಎಂದು ಸ್ಪೀಕರ್ ರಮೇಶ್ ಕುಮಾರ್ ಅವರಿಗೆ ಸೂಚನೆ ನೀಡಿತ್ತು.